ಇ) ಪರಿಶೀಲನೆಯಲ್ಲಿದೆ.

ರಾಜ್ಯದಲ್ಲಿ ಕನ್ನಡ ವಿಶ್ವವಿದ್ಯಾಲಯವನ್ನು ಪ್ರಾರಂಭ ಮಾಡುವ ಬಗ್ಗೆ

1215 - ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ) : ಮಾನ್ಯ ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ವರ್ಷ ರಾಜ್ಯದಲ್ಲಿ ಕನ್ನಡ ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸಲಿರುವುದು ನಿಜವೇ?

ಆ) ಹಾಗಿದ್ದಲ್ಲಿ ಇದಕ್ಕಾಗಿ ಎಷ್ಟು ಹಣವನ್ನು ಇಡಲಾಗಿದೆ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ಸಚಿವರು)

ಅ) ಈ ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸಲು ಮಸೂದೆಯನ್ನು ತಯಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ರೂ. 1.00 ಕೋಟಿ

ಬೈಲಹೊಂಗಲ ತಾಲ್ಲೂಕು ಪೈಕಿ ನೇಸರಗಿ ಗ್ರಾಮದಲ್ಲಿ ಸರ್ಕಾರಿ ಹೈಸ್ಕೂಲ್ ಕಟ್ಟಡ ಕೆಲಸ ಸ್ಥಗಿತಗೊಂಡ ಬಗ್ಗೆ

325 - ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕ ಪೈಕಿ ನೇಸರಗಿ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆ ಕಟ್ಟಡ ಕಟ್ಟುವ ಕೆಲಸ ಸ್ಥಗಿತಗೊಂಡ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಈ ಸರ್ಕಾರಿ ಪ್ರೌಢಶಾಲೆಯ ಕಟ್ಟಡದ ಕೆಲಸಕ್ಕೆ ಆಡಳಿತ ಮಂಜೂರಾತಿಯನ್ನು ಹಾಗೂ ತಾಂತ್ರಿಕ ಮಂಜೂರಾತಿಯನ್ನು ಯಾವಾಗ ಕೊಡಲಾಯಿತು?

ಇ) ಈ ಪ್ರೌಢಶಾಲಾ ಕಟ್ಟಡ ಕಟ್ಟುವ ಕೆಲಸವನ್ನು ಮುಗಿಸಲು ಇನ್ನು ಎಷ್ಟು ಕಾಲ ಬೇಕಾಗುವುದು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) 1987ನೇ ವರ್ಷದಲ್ಲಿ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದ್ದು, ಅದಕ್ಕೆ ರೂ. 4.97 ಲಕ್ಷಗಳ ತಾಂತ್ರಿಕ ಮಂಜೂರಾತಿಯನ್ನು ಸಹ ದಿನಾಂಕ 19-11-1990 ರಂದು ನೀಡಲಾಗಿದೆ.

ಇ) ಸದರಿ ಕಟ್ಟಡದ ಗುತ್ತಿಗೆಯನ್ನು ಪಡೆದಿದ್ದ ಶ್ರೀ ಎ.ಬಿ. ಹಾವಣ್ಣನವರ ಇವರು ಕೆಲಸವನ್ನು ಗುತ್ತಿಗೆ ನಿಯಮದ ಪ್ರಕಾರ ಪೂರೈಸಿರುವುದಿಲ್ಲ. ಆದಕಾರಣ ಅವರ ಟೆಂಡರನ್ನು ರದ್ದುಮಾಡಿ ಅವರಿಗೆ ಶೇಕಡಾ $7\frac{1}{2}$ಯಂತೆ ದಂಡ ವಿಧಿಸುವಂತೆ ಜಿಲ್ಲಾ ಪರಿಷತ್ತಿನ ಕಾರ್ಯ ನಿರ್ವಾಹಕ ಅಬಿಯಂತರರು ಬೆಳಗಾವಿ ಅಧೀಕ್ಷಕ ಅಭಿಯಂತರವರಿಗೆ ತಿಳಿಸಿರುತ್ತಾರೆ.

ಈ ಬಗ್ಗೆ ಮರು ಟೆಂಡರು ಕರೆದು ಕಟ್ಟಡದ ಕೆಲಸವನ್ನು ಶೀಘ್ರವಾಗಿ ಮುಗಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಡಿಗ್ರಿ ಕಾಲೇಜುಗಳ ಪರೀಕ್ಷೆ ಫಲಿತಾಂಶಗಳ ಪ್ರಮಾಣ